ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 22/3/2020

# ಅಂಕೋಲಾ ರೈಲ್ವೆ ಮಾರ್ಗದಿಂದ ಉದ್ಯೋಗಾವಕಾಶ: ರೂಪಾಲಿ

## ಆರ್ಥಿಕ ಚಟುವಟಿಕೆಗೆ ಚುರುಕು : ಸಿಎಂಗೆ ಧನ್ಯವಾದ

**ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯ ವನ್ಯಜೀವಿ ಮಂಡಳಿ ಹುಬ್ಬಳ್ಳಿ-ಅಂಕೋಲಾ ರೈಲು ಮಾರ್ಗಕ್ಕೆ ಸಮ್ಮತಿ ಸೂಚಿಸಿರುವುದರಿಂದ ಕಾರವಾರ ಅಂಕೋಲಾ ವಿಧಾನಸಭೆ ಕ್ಷೇತ್ರದ ಜನತೆಯ ಬಹುಕಾಲದ ಕನಸು ಸಾಕಾರಗೊಳ್ಳಲು ಇದ್ದ ಬಲು ದೊಡ್ಡ ಅಡ್ಡಿ ನಿವಾರಣೆಯಾಗಿದೆ ಎಂದು ಕಾರವಾರ-ಅಂಕೋಲಾ ಕ್ಷೇತ್ರದ ಶಾಸಕಿ ರೂಪಾಲಿ ನಾಯ್ಕ ಅಭಿಪ್ರಾಯಪಟ್ಟಿದ್ದಾರೆ.

ಕ್ಷೇತ್ರದ ಜನತೆ ಪಾಲಿಗೆ ಇದು ಮಹತ್ವದ ನಿರ್ಧಾರ. ಬೆಂಗಳೂರಿನಲ್ಲಿ ಶುಕ್ರವಾರ ನಡೆದ ರಾಜ್ಯ ವನ್ಯಜೀವಿ ಮಂಡಳಿ ಸಭೆಯಲ್ಲಿ ಮಂಡಳಿ ಅಧ್ಯಕ್ಷರೂ ಆಗಿರುವ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ರೈಲ್ವೆ ಮಾರ್ಗ ನಿರ್ಮಾಣ ಯೋಜನೆಗೆ ಸಮ್ಮತಿ ಸೂಚಿಸುವುದರೊಂದಿಗೆ ಕಾರವಾರ- ಅಂಕೋಲಾ ವಿಧಾನಸಭೆ ಕ್ಷೇತ್ರದಲ್ಲಿ ಸಂಭ್ರಮಕ್ಕೆ ಕಾರಣರಾಗಿದ್ದಾರೆ. ಈ ರೈಲು ಮಾರ್ಗ ನಿರ್ಮಾಣದಿಂದ ಈ ಪ್ರದೇಶದಲ್ಲಿ ಉದ್ಯೋಗಾವಕಾಶಗಳು ತೆರೆದುಕೊಳ್ಳಲಿವೆ. ವಾಣಿಜ್ಯ ರಾಜಧಾನಿ ಮೂಲಕ ರಾಜ್ಯ, ದೇಶದ ರಾಜಧಾನಿ ಹಾಗೂ ದೇಶದ ವಿವಿಧೆಡೆ ಸಂಪರ್ಕ ಸಾಧ್ಯವಾಗಲಿದೆ. ನಮ್ಮ ಆರ್ಥಿಕ ಚಟುವಟಿಕೆಗಳು ಚುರುಕುಗೊಳ್ಳಲಿವೆ ಎಂದಿದ್ದಾರೆ. ವನ್ಯಜೀವಿ ಮಂಡಳಿ ಕೈಗೊಂಡ ನಿರ್ಧಾರಕ್ಕಾಗಿ ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಹಾಗೆಯೇ ಇದಕ್ಕಾಗಿ ಪ್ರಯತ್ನಿಸಿದ ಸಚಿವರಾದ ಸುರೇಶ ಅಂಗಡಿ, ಪ್ರಹ್ಲಾದ ಜೋಶಿ, ಜಗದೀಶ ಶೆಟ್ಟರ್, ಆನಂದ ಸಿಂಗ್, ಶಶಿಕಲಾ ಜೊಲ್ಲೆ, ಶಿವರಾಮ ಹೆಬ್ಬಾರ್, ಸಂಸದ ಅನಂತಕುಮಾರ್ ಹೆಗಡೆ ಹಾಗೂ ಹೋರಾಟದಲ್ಲಿ ಭಾಗಿಯಾದ ಎಲ್ಲರಿಗೂ ಅಭಿನಂದನೆಗಳನ್ನು ಸಲ್ಲಿಸುವುದಾಗಿ ಶಾಸಕಿ ರೂಪಾಲಿ ನಾಯ್ಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗೆ ರೂಪಾಲಿ ನಾಯ್ಕ ಮನವಿ